ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ವಿಷಯ : DEPARTMENT / SUBJECT:
ಹೆಸರು : NAME OF THE NEWS PAPER:
ದಿನಾಂಕ : DATE :

### 70 ದಿನಗಳಿಂದ ಶಾಂತಿಯುತವಾಗಿ ನಡೆದಿದ್ದ ರೈತರ ಹೋರಾಟ ಉಗ್ರರೂಪಕ್ಕೆ

# ರಾಷ್ಟ್ರ ರಾಜಧಾನಿಯಲ್ಲಿ ಭುಗಿಲೆದ್ದ ಕಿಸಾನ್ ಕಿಚ್ಚು

**ದೆಹಲಿ:** ಭಾರತದ 72ನೇ ಗಣರಾಜ್ಯೋತ್ಸವ ದಿನದಂದೇ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ರೈತರು ಪ್ರತಿಭಟನೆ ಹಿಂಸಾರೂಪಕ್ಕೆ ತಿರುಗಿದೆ. ಮೂರು ನೂತನ ಕೃಷಿ ಕಾಯಿದೆಗಳನ್ನು ವಿರೋಧಿಸಿ ರೈತ ಸಂಘಟನೆಗಳು ಹಮ್ಮಿಕೊಂಡಿದ್ದ ಟ್ರ್ಯಾಕ್ಟರ್ ಪರೇಡ್ ಉಗ್ರರೂಪಕ್ಕೆ ತಿರುಗಿತ್ತು.

ಪಂಜಾಬ್, ಹರಿಯಾಣ, ಉತ್ತರ ಪ್ರದೇಶ ಸೇರಿದಂತೆ ವಿವಿಧ ಭಾಗಗಳಿಂದ ದೆಹಲಿ ಗಡಿಗೆ ಟ್ರ್ಯಾಕ್ಟರ್ ಸಮೇತ ಆಗಮಿಸಿದ ಸಾವಿರಾರು ರೈತರು ಸಿಂಘು ಗಡಿಯಲ್ಲಿ ಭಾರಿ ಸಂಖ್ಯೆಯಲ್ಲಿ ಜಮಾವಣೆಗೊಂಡರು. ಬೆಳಗ್ಗೆ 11 ಗಂಟೆ ನಂತರ ರೈತರ ರ್‍ಯಾಲಿಗೆ ಅನುಮತಿ ಇದ್ದರೂ, ಅದಕ್ಕೂ ಮೊದಲೇ ಪೊಲೀಸರು ಹಾಕಿದ್ದ ಬ್ಯಾರಿಕೇಡ್ ನುಗ್ಗಿ ರೈತರು ಹೊರಟ ಕಾರಣ ಹಿಂಸಾಚಾರ ಭುಗಿಲೆದ್ದಿತು. ಅಪಾರ ಸಂಖ್ಯೆಯಲ್ಲಿದ್ದ ಉದ್ರಿಕ್ತ ಪ್ರತಿಭಟನಕಾರರು ಪೊಲೀಸರ ಮೇಲೆ ದಾಳಿ ನಡೆಸಿ, ಪೊಲೀಸ್ ವಾಹನಗಳನ್ನು ಧ್ವಂಸಗೊಳಿಸಿದ್ದಾರೆ.

**ರೈತನ ಸಾವು:** ರೈತರ ಟ್ರ್ಯಾಕ್ಟರ್ ಪರೇಡ್‌ನಲ್ಲಿ ಮಧ್ಯ ದೆಹಲಿಯ ಐಟಿಒದಲ್ಲಿ ಟ್ರಾಕ್ಟರ್ ಪಲ್ಟಿಯಾಗಿ ಪ್ರತಿಭಟನಾ ನಿರತ ರೈತ ಮೃತಪಟ್ಟಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಐಟಿಒ ಬಳಿ ರೈತರು ಮತ್ತು ಪೊಲೀಸರ ನಡುವೆ ನಡೆದ ಘರ್ಷಣೆ ವೇಳೆ ಲಾಠಿ ಚಾರ್ಜ್‌ನಿಂದ ಹಲವರು ಗಾಯಗೊಂಡಿದ್ದಾರೆ.

**ಮೆಟ್ರೊ ರೈಲು ಬಂದ್:** ರೈತರ ಪ್ರತಿಭಟನೆ ತೀವ್ರ ಸ್ವರೂಪ ಪಡೆದ ಹಿನ್ನೆಲೆಯಲ್ಲಿ ಐಟಿಒ ಸೇರಿದಂತೆ ಹಲವು ಮೆಟ್ರೊ ನಿಲ್ದಾಣ ಬಂದ್ ಮಾಡಲಾಯಿತು. ಮಧ್ಯ ಮತ್ತು ಉತ್ತರ ದೆಹಲಿಯ 10ಕ್ಕೂ ಹೆಚ್ಚು ಮೆಟ್ರೊ ನಿಲ್ದಾಣಗಳ ಆಗಮನ ಮತ್ತು ನಿರ್ಗಮನ ಗೇಟ್‌ಗಳನ್ನು ತಾತ್ಕಾಲಿಕವಾಗಿ ಮುಚ್ಚಲಾಗಿತ್ತು.

**ಹೆಚ್ಚಿದ ಭದ್ರತೆ:** ಹೆಚ್ಚಿನ ಭದ್ರತೆಗೆ ರ್‍ಯಾಪಿಡ್ ಆ್ಯಕ್ಷನ್ ಫೋರ್ಸ್ (ಆರ್‌ಎಎಫ್) ನಿಯೋಜಿಸಲಾಗಿದ್ದು, ಅಹಿತಕರ ಘಟನೆ ನಡೆಯದಂತೆ ತಡೆಯುವ ಜವಾಬ್ದಾರಿ ಅವರ ಮೇಲಿದೆ.



ಕೆಂಪು ಕೋಟೆಯ ಬಳಿ ಜಮಾಯಿಸಿದ್ದ ಹೋರಾಟಗಾರರು.

ಸರಕಾರ ಈ ದಿನಕ್ಕಾಗಿ ಕುತೂಹಲದಿಂದ ಕಾಯುತ್ತಿತ್ತೇ? ಸರಕಾರ ಕೊನೆಯವರೆಗೂ ಲಕ್ಷಾಂತರ ರೈತರ ಮಾತುಗಳನ್ನು ಕೇಳಲಿಲ್ಲ. ನಮ್ಮ ದೇಶದಲ್ಲಿ ಯಾವ ರೀತಿಯ ಪ್ರಜಾಪ್ರಭುತ್ವ ಪ್ರವರ್ಧಮಾನಕ್ಕೆ ಬರುತ್ತಿದೆ? ಇದು ಪ್ರಜಾಪ್ರಭುತ್ವ ಸಹೋದರನಲ್ಲ... ಇನ್ನೇನೋ ನಡೆಯುತ್ತಿದೆ.

**-ಸಂಜಯ್ ರಾವುತ್** ಶಿವಸೇನೆ ನಾಯಕ

## ಕೆಂಪುಕೋಟೆ ಮೇಲೆ ಧ್ವಜ

ಸ್ವಾತಂತ್ರ್ಯ ದಿನದಂದು ಪ್ರಧಾನಿ ರಾಷ್ಟ್ರವನ್ನು ಉದ್ದೇಶಿಸಿ ಮಾತನಾಡುವ ಅಪ್ರತಿಮ ಕೆಂಪು ಕೋಟೆಗೆ ಮಧ್ಯಾಹ್ನದ ವೇಳೆಗೆ ಆಗಮಿಸಿದ ಪ್ರತಿಭಟನಾ ನಿರತರು, ಕೆಂಪುಕೋಟೆ ಮೇಲೆ ನಿಶಾನ್ ಸಾಹಿಬ್ ಧ್ವಜ ಹಾರಿಸಿದರು. ನಂತರ, ಸ್ಥಳಕ್ಕಾಗಮಿಸಿದ ಪೊಲೀಸರು ಪ್ರತಿಭಟನಾನಿರತ ರೈತರ ಮೇಲೆ ಲಘು ಲಾಠಿ ಪ್ರಹಾರ ನಡೆಸಿ, ಎಲ್ಲರನ್ನೂ ಹೊರ ಹಾಕಿದರು.



## ಇಂಟರ್‌ನೆಟ್ ಕಟ್

ಟಿಕ್ರಿ, ಸಿಂಘು, ಗಾಜಿಪುರ ಗಡಿಗಳು ಮತ್ತು ಅದರ ಸುತ್ತಮುತ್ತಲ ಪ್ರದೇಶಗಳಲ್ಲಿ ತಾತ್ಕಾಲಿಕವಾಗಿ ಇಂಟರ್‌ನೆಟ್ ಸ್ಥಗಿತಗೊಳಿಸಲಾಗಿದೆ.

ರೈತರು ಕೆಂಪು ಕೋಟೆಗೆ ಪ್ರವೇಶಿಸಿ ರಾಷ್ಟ್ರಧ್ವಜ ಹಾರುವ ಸ್ಥಳದಲ್ಲಿ ಬೇರೊಂದು ಧ್ವಜ ಹಾರಿಸಿ ಭಾರತದ ಪ್ರಜಾಪ್ರಭುತ್ವದ ಘನತೆಯ ಸಂಕೇತವನ್ನು ಉಲ್ಲಂಘಿಸಿದ್ದಾರೆ, ಇದು ಖಂಡನೀಯ.

**-ಪ್ರಹ್ಲಾದ್ ಪಟೇಲ್**
ಕೇಂದ್ರ ಪ್ರವಾಸೋದ್ಯಮ ಸಚಿವ

ಪ್ರತಿಭಟನಾನಿರತ ರೈತರ ಮೇಲೆ ಅಶ್ರುವಾಯು ಪ್ರಯೋಗ ಹಾಗೂ ಲಾಠಿ ಚಾರ್ಜ್ ಮಾಡಿರುವುದು ಸ್ವೀಕಾರಾರ್ಹವಲ್ಲ. ದೆಹಲಿ ಪೊಲೀಸರು ಮತ್ತು ಸಂಯುಕ್ತ ಕಿಸಾನ್ ಮೋರ್ಚಾ ನಡುವೆ ಶಾಂತಿಯುತ ಟ್ರ್ಯಾಕ್ಟರ್ ಪರೇಡ್‌ಗೆ ಒಪ್ಪಂದವಿದ್ದ ಮೇಲೆ ಅವಕಾಶ ನೀಡಬೇಕು. ಸರಕಾರ ಅವರನ್ನು ಪ್ರಚೋದಿಸುತ್ತಿರುವುದು ಖಂಡನೀಯ.

**-ಸೀತಾರಾಮ್ ಯೆಚೂರಿ**
ಸಿಪಿಎಂ ಪ್ರಧಾನ ಕಾರ್ಯದರ್ಶಿ

ಅತ್ಯಂತ ದುರದೃಷ್ಟಕರ. ನಾನು ಮೊದಲಿನಿಂದಲೂ ರೈತರ ಪ್ರತಿಭಟನೆಯನ್ನು ಬೆಂಬಲಿಸಿದ್ದೇನೆ. ಆದರೆ ಕಾನೂನುಬಾಹಿರ ಕೃತ್ಯವನು ನಾನು ಎಂದಿಗೂ ಕ್ಷಮಿಸುವುದಿಲ್ಲ. ಗಣರಾಜ್ಯೋತ್ಸವದಂದು ಕೆಂಪುಕೋಟೆಯ ಮೇಲೆ ಪವಿತ್ರ ರಾಷ್ಟ್ರಧ್ವಜವನ್ನು ಹೊರತುಪಡಿಸಿ ಬೇರೆ ಯಾವುದೇ ಧ್ವಜ ಹಾರಬಾರದು.

**-ಶಶಿ ತರೂರ್** ಕಾಂಗ್ರೆಸ್ ಸಂಸದ

ಪ್ರಜಾಪ್ರಭುತ್ವದಲ್ಲಿ ಯಾವುದೇ ಹಿಂಸಾಚಾರ ಸ್ವೀಕಾರ್ಹವಲ್ಲ. ಕಾನೂನು ಸರ್ವೋಚ್ಚವಾಗಿರಬೇಕು. ರಾಷ್ಟ್ರವನ್ನು ಸೋಲಿಸಿ ಯಾವುದೇ ಪಕ್ಷ ಗೆಲುವು ಸಾಧಿಸಲು ಸಾಧ್ಯವಿಲ್ಲ. ಗಣರಾಜ್ಯ ದಿನ ದುಃಖದ ದಿನವಾಗಿದೆ.

**-ಪ್ರಿಯಾಂಕಾ ಚತುರ್ವೇದಿ**
ಶಿವಸೇನೆ ರಾಜ್ಯಸಭಾ ಸದಸ್ಯೆ